Annexure - 3

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- "ವಾಜಪೇಯಿ ಆರೋಗ್ಯಶ್ರೀ" ಯೋಜನೆಯನ್ನು ಬೆಳಗಾಂ ವಿಭಾಗದ ಏಳು ಜಿಲ್ಲೆಗಳಿಗೆ ವಿಸ್ತರಿಸುವ ಬಗ್ಗೆ.

ಓದಲಾಗಿದೆ :-

1. ಸರ್ಕಾರಿ ಆದೇಶ ಸಂಖ್ಯೆ ಆಕುಕ 216 ಸಿಜಿಇ 2008 ದಿನಾಂಕ: 20-2-2009.
2. ಸರ್ಕಾರಿ ಆದೇಶ ಸಂಖ್ಯೆ ಆಕುಕ 302 ಸಿಜಿಇ 2009 ದಿನಾಂಕ: 4-1-2010.
3. ಪತ್ರ ಸಂಖ್ಯೆ: ಹೆಚ್‌ಎಫ್‌ಡಬ್ಲ್ಯೂ/ಎಸ್‌ಎಎಸ್‌ಟಿ/ಬೆಳಗಾಂ/ನೋಟ್/80/2010-11 ದಿನಾಂಕ: 12-7-2010.

*******

**ಪ್ರಸ್ತಾವನೆ:-**

ಕರ್ನಾಟಕ ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಜನರು ಒಮ್ಮೆಲೆ ದುರಂತ ಉಂಟು ಮಾಡುವ (catastrophic) ಆರೋಗ್ಯ ಆಘಾತಗಳಿಗೆ ಒಳಗಾಗುತ್ತಾರೆ. ರಾಜ್ಯದಲ್ಲಿ ಪ್ರಸ್ತುತ ಇರುವ ಆರೋಗ್ಯ ವಿಮೆ ಕಾರ್ಯಕ್ರಮಗಳು ಬಡತನ ರೇಖೆಗಿಂತ ಕೆಳಗಿರುವ ಜನರಿಗೆ ಬಹಳ ಕಡಿಮೆ ಪ್ರಮಾಣದಲ್ಲಿ ತಲುಪುತ್ತಿವೆ. ಈ ತೊಂದರೆಯನ್ನು ನಿವಾರಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸುವರ್ಣ ಆರೋಗ್ಯ ಸುರಕ್ಷಾ ಎಂಬ ಒಂದು ಹೊಸ ಆರೋಗ್ಯ ಚಿಕಿತ್ಸಾ ಯೋಜನೆಯನ್ನು ಬಡತನ ರೇಖೆಗಿಂತ ಕೆಳಗಿರುವ ಜನರಿಗೆ ನಗದುರಹಿತವಾಗಿ ಆರೋಗ್ಯ ಚಿಕಿತ್ಸೆ ಸೌಲಭ್ಯವನ್ನು ಒದಗಿಸುವ ಮೂಲಕ ಒಮ್ಮೆಲೆ ದುರಂತ ಉಂಟು ಮಾಡುವ ಕಾಯಿಲೆಗಳಿಗೆ ಚಿಕಿತ್ಸೆ ನೀಡಲು ಗುಲ್ಬರ್ಗಾ ವಿಭಾಗದ ಆರು ಜಿಲ್ಲೆಗಳಾದ ಬೀದರ್, ಗುಲ್ಬರ್ಗಾ, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಪ್ರಾರಂಭಿಕವಾಗಿ ಜಾರಿಗೊಳಿಸಲು ಮೇಲೆ (1) ರಲ್ಲಿ ಓದಲಾದ ದಿನಾಂಕ 20-2-2009 ರ ಸರ್ಕಾರಿ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ. ಮುಂದುವರೆದು, ಮೇಲೆ (2) ರಲ್ಲಿ ಓದಲಾದ ಸರ್ಕಾರಿ ಆದೇಶ ದಿನಾಂಕ: 4-1-2010 ರಲ್ಲಿ ಈ ಯೋಜನೆಗೆ "ವಾಜಪೇಯಿ ಆರೋಗ್ಯಶ್ರೀ" ಎಂದು ಮರುನಾಮಕರಣ ಮಾಡಲಾಗಿದೆ.

ಮಾನ್ಯ ಘನತೆವೆತ್ತ ರಾಜ್ಯಪಾಲರು ರಾಜ್ಯ ವಿಧಾನ ಮಂಡಲವನ್ನು ಉದ್ದೇಶಿಸಿ ದಿನಾಂಕ: 25-2-2010 ರಂದು ಮಾಡಿದ ಭಾಷಣದಲ್ಲಿ ಹಾಗೂ ಮಾನ್ಯ ಮುಖ್ಯ ಮಂತ್ರಿಯವರು 2010-11 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ವಾಜಪೇಯಿ ಆರೋಗ್ಯಶ್ರೀ ಯೋಜನೆಯನ್ನು ಹಂತ-ಹಂತವಾಗಿ ರಾಜ್ಯಾದ್ಯಂತ ವಿಸ್ತರಿಸಲಾಗುವುದು ಎಂದು ಘೋಷಿಸಿದ್ದಾರೆ.

ಮೇಲ್ಕಂಡಂತೆ ಘೋಷಿಸಿದ ಅನುಸಾರ, ಈ ಯೋಜನೆಯನ್ನು ಹಂತ ಹಂತವಾಗಿ ರಾಜ್ಯಾದ್ಯಂತ ವಿಸ್ತರಿಸುವ ನಿಟ್ಟಿನಲ್ಲಿ ಬೆಳಗಾಂ ವಿಭಾಗದ ಏಳು ಜಿಲ್ಲೆಗಳಲ್ಲಿ ವಾಜಪೇಯಿ ಆರೋಗ್ಯಶ್ರೀ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ ವಿಸ್ತರಿಸಲು ಉದ್ದೇಶಿಸಲಾಗಿದೆ. ಕರ್ನಾಟಕ ಮಾನವ ಸಂಪನ್ಮೂಲ ವರದಿಯ ಪ್ರಕಾರ, ಬೆಳಗಾಂ ವಿಭಾಗದ 7 ಜಿಲ್ಲೆಗಳಾದ ಬೆಳಗಾಂ, ಬಾಗಲಕೋಟೆ, ಬಿಜಾಪುರ, ಧಾರವಾಡ, ಗದಗ, ಹಾವೇರಿ ಮತ್ತು ಉತ್ತರ ಕನ್ನಡ ಇಲ್ಲಿ ರಾಜ್ಯಕ್ಕೆ ಹೋಲಿಸಿದಲ್ಲಿ ಆರೋಗ್ಯ ಸೂಚ್ಯಾಂಕಗಳು ಕಡಿಮೆ ಇವೆ. ವಾಜಪೇಯಿ ಆರೋಗ್ಯಶ್ರೀ ಯೋಜನೆಯನ್ನು ತಕ್ಷಣವೇ ಜಾರಿಗೊಳಿಸಲು ಬೆಳಗಾಂ ವಿಭಾಗ ಅರ್ಹತೆ ಹೊಂದಿದೆ; ಏಕೆಂದರೆ ಅಲ್ಲಿ ಬಡತನ ರೇಖೆಗಿಂತ ಕೆಳಗೆ ವಾಸಿಸುತ್ತಿರುವವರ ಜನಸಂಖ್ಯೆ ಶೇಕಡ 69.1 ಆಗಿದ್ದು ರಾಜ್ಯ ಮತ್ತು ಗುಲ್ಬರ್ಗಾ ವಿಭಾಗಕ್ಕಿಂತ ಸ್ವಲ್ಪ ಮೇಲಿದೆ. ಅಂದರೆ ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗೆ ವಾಸಿಸುತ್ತಿರುವವರ ಜನಸಂಖ್ಯೆ ಶೇಕಡ 60 ಮತ್ತು ಗುಲ್ಬರ್ಗಾದಲ್ಲಿ ಅದು ಶೇಕಡ 61.5 ಆಗಿದೆ.

ದಿನಾಂಕ 29-6-2010 ರಂದು ಇದ್ದಂತೆ, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಪಡಿತರ ಚೀಟಿಗಳನ್ನು ವಿತರಿಸಿರುವ ಕುರಿತಂತೆ ನೀಡಿರುವ ವರದಿ ಪ್ರಕಾರ, ಬೆಳಗಾಂ ವಿಭಾಗದಲ್ಲಿ ಬಿ.ಪಿ.ಎಲ್. ಪಡಿತರ ಚೀಟಿಗಳನ್ನು ಹೊಂದಿರುವವರ ಸಂಖ್ಯೆ 16.68 ಲಕ್ಷಗಳು. ವಾಜಪೇಯಿ ಆರೋಗ್ಯಶ್ರೀ ಯೋಜನೆಯನ್ನು ಬೆಳಗಾಂ ವಿಭಾಗದ 7 ಜಿಲ್ಲೆಗಳಿಗೆ ವಿಸ್ತರಿಸಲು ವಾರ್ಷಿಕವಾಗಿ ಸುಮಾರು ರೂ. 53 ಕೋಟಿಗಳು ಬೇಕಾಗುತ್ತದೆ. ಬೆಳಗಾಂ ವಿಭಾಗಕ್ಕೆ ಸಂಬಂಧಿಸಿದಂತೆ ಸಹ ಯೋಜನೆಯನ್ನು ಜಾರಿಗೊಳಿಸಲು ನೆರವು ಏಜೆನ್ಸಿ ಗುರುತಿಸುವಿಕೆ, ಜಾಲ ಆಸ್ಪತ್ರೆಗಳ ಗುರುತಿಸುವಿಕೆ, ಆರೋಗ್ಯ ಮೇಳ ನಡೆಸುವುದು ಇತ್ಯಾದಿ ಪೂರ್ವಸಿದ್ಧತೆ ಮಾಡಿಕೊಳ್ಳಲು ಟೆಂಡರ್ ಪ್ರಕ್ರಿಯೆ ಮಾಡಬೇಕಿರುವ ಕಾರಣ, ಬೆಳಗಾಂ ವಿಭಾಗದಲ್ಲಿ ಈ ಯೋಜನೆಯನ್ನು ಜಾರಿಗೆ ತರಲು ಇನ್ನೂ ಸುಮಾರು 4 ತಿಂಗಳು ಬೇಕಾಗುತ್ತದೆ.

ಸುವರ್ಣ ಸುರಕ್ಷಾ ಟ್ರಸ್ಟ್‌ನ ಕಾರ್ಯಕಾರಿ ನಿರ್ದೇಶಕರು ಮೇಲೆ ಓದಲಾದ (3) ರ ಪತ್ರದಲ್ಲಿ ಮೇಲ್ಕಂಡ ಮಾಹಿತಿಯನ್ನು ಸರ್ಕಾರಕ್ಕೆ ಒದಗಿಸುತ್ತಾ, ವಾಜಪೇಯಿ ಆರೋಗ್ಯಶ್ರೀ ಯೋಜನೆಯನ್ನು ಬೆಳಗಾಂ ವಿಭಾಗಕ್ಕೆ ವಿಸ್ತರಿಸುವ ಕುರಿತಂತೆ ಸರ್ಕಾರ ಸೂಕ್ತ ಆದೇಶವನ್ನು ಹೊರಡಿಸಬೇಕೆಂದು ಕೋರಿದ್ದಾರೆ.

ವಾಜಪೇಯಿ ಆರೋಗ್ಯಶ್ರೀ ಯೋಜನೆಯು ಚಾಲ್ತಿಯಲ್ಲಿರುವ ಕಾರ್ಯಕ್ರಮವಾಗಿದೆ ಹಾಗೂ ಈ ಕಾರ್ಯಕ್ರಮವನ್ನು ಜಾರಿಗೊಳಿಸಲು ರಚಿತವಾಗಿರುವ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ಗೆ ಸರ್ಕಾರವು ಈಗಾಗಲೇ ಬಿಡುಗಡೆ ಮಾಡಿರುವ ರೂ. 21 ಕೋಟಿಗಳ ಪೈಕಿ, ರೂ. 7 ಕೋಟಿಗಳು ವೆಚ್ಚವಾಗಿದೆ ಹಾಗೂ ಪ್ರಸಕ್ತ ಸಾಲಿನಲ್ಲಿ ಗುಲ್ಬರ್ಗಾ ವಿಭಾಗದಲ್ಲಿ ಸುಮಾರು ರೂ. 35 ಕೋಟಿಗಳು ವೆಚ್ಚವಾಗಬಹುದೆಂದು ನಿರೀಕ್ಷಿಸಲಾಗಿದೆ. ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ವಾಜಪೇಯಿ ಆರೋಗ್ಯಶ್ರೀ ಯೋಜನೆಯನ್ನು ಜಾರಿಗೊಳಿಸಲು ರೂ. 40 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ. ಗುಲ್ಬರ್ಗಾ ವಿಭಾಗಕ್ಕೆ ಪ್ರಸಕ್ತ ಸಾಲಿನಲ್ಲಿ ಅವಶ್ಯವಿರುವ ಅನುದಾನವನ್ನು ಗಣನೆಗೆ ತೆಗೆದುಕೊಂಡ ನಂತರವೂ ರೂ. 19 ಕೋಟಿಗಳು ಲಭ್ಯವಾಗುತ್ತದೆ. ಪ್ರಸಕ್ತ ಸಾಲಿನ ಉಳಿದ ಆರ್ಥಿಕ ವರ್ಷದಲ್ಲಿ ಬೆಳಗಾಂ ವಿಭಾಗಕ್ಕೆ ಸುಮಾರು ರೂ. 13 ಕೋಟಿಗಳು ಬೇಕಾಗಬಹುದಾದ ಕಾರಣ, ಈ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನ ಬೆಳಗಾಂ ವಿಭಾಗದ 7 ಜಿಲ್ಲೆಗಳಿಗೂ ವಿಸ್ತರಿಸಿದರೂ ಸಾಕಾಗುತ್ತದೆ.

ಮೇಲ್ಕಂಡ ಪ್ರಸ್ತಾವನೆಯನ್ನು ಸರ್ಕಾರವು ಆರ್ಥಿಕ ಇಲಾಖೆಯ ಸಮಾಲೋಚನೆಯೊಂದಿಗೆ ಪರಿಶೀಲಿಸಿದೆ. ಗುಲ್ಬರ್ಗಾ ವಿಭಾಗದಿಂದ ಬೇರೆ ಜಿಲ್ಲೆಗಳಿಗೆ ವಿಸ್ತರಿಸುವ ಮುನ್ನ ಇಲಾಖೆಯು ಗುಲ್ಬರ್ಗಾ ವಿಭಾಗದಲ್ಲಿನ ಒಟ್ಟುಗೂಡಿಸಿದ ಅನುಭವವನ್ನು ಅಧ್ಯಯನ ಮಾಡುವಂತೆ ಅಭಿಪ್ರಾಯ ವ್ಯಕ್ತಪಡಿಸಿದೆ. ವಾಜಿಪೇಯಿ ಆರೋಗ್ಯಶ್ರೀ ಯೋಜನೆಯು ಗುಲ್ಬರ್ಗಾ ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯಗತವಾಗಿರುತ್ತದೆ. ಪ್ರಸ್ತುತ ವರ್ಷದಲ್ಲಿ ಲಭ್ಯವಿರುವ ಅನುದಾನ ಬೆಳಗಾಂ ವಿಭಾಗದ 7 ಜಿಲ್ಲೆಗಳಿಗೆ ವಿಸ್ತರಿಸಿದರೂ ಸಾಕಾಗಬಹುದು ಎಂದು ನಿರೀಕ್ಷಿಸಲಾಗಿದೆ. ವಾಜಿಪೇಯಿ ಆರೋಗ್ಯಶ್ರೀ ಕಾರ್ಯಕ್ರಮ ಸರ್ಕಾರದ ಒಂದು ಪ್ರತಿಷ್ಠಿತ ಕಾರ್ಯಕ್ರಮವಾಗಿದ್ದು, ಈ ಯೋಜನೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಅನುಷ್ಠಾನಗೊಳಿಸಬೇಕಾದ ಬದ್ಧತೆಯನ್ನು ಹೊಂದಿರುವ ಕಾರಣ, ಈ ವಿಷಯವನ್ನು ಸಚಿವ ಸಂಪುಟದ ಮುಂದೆ ಮಂಡಿಸಲು ಪ್ರಸ್ತಾಪಿಸಲಾಗಿತ್ತು. ಬೆಳಗಾಂ ವಿಭಾಗದ ಜಿಲ್ಲೆಗಳಿಗೆ ಈ ಯೋಜನೆಯನ್ನು ವಿಸ್ತರಿಸುವ ಕುರಿತು ತ್ವರಿತವಾಗಿ ನಿರ್ಧಾರ ಕೈಗೊಳ್ಳಬೇಕಿದ್ದ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರ (ವ್ಯವಹರಣೆ ನಿರ್ವಹಣೆ) ನಿಯಮಗಳು, 1977 ರ ಮೊದಲನೆ ಅನುಸೂಚಿಯ ಕ್ರಮ ಸಂಖ್ಯೆ 2 ರ ಪ್ರಾವಿಜೋ ರನ್ವಯ ವಾಜಿಪೇಯಿ ಆರೋಗ್ಯಶ್ರೀ ಯೋಜನೆಯನ್ನು ಬೆಳಗಾಂ ವಿಭಾಗದ 7 ಜಿಲ್ಲೆಗಳಿಗೆ ವಿಸ್ತರಣೆ ಮಾಡಿ ಆದೇಶವನ್ನು ಹೊರಡಿಸಿ ತದನಂತರ ಸಚಿವ ಸಂಪುಟದ ಘಟನೋತ್ತರ ಅನುಮೋದನೆಯನ್ನು ಪಡೆಯಲು ಮಾನ್ಯ ಮುಖ್ಯ ಮಂತ್ರಿಯವರು ಅನುಮೋದಿಸಿದ್ದಾರೆ.

ಆದುದರಿಂದ, ಈ ಕೆಳಕಂಡ ಆದೇಶ,

**ಸರ್ಕಾರಿ ಆದೇಶ ಸಂಖ್ಯೆ: ಆಕುಕ 143 ಸಿಜಿಇ 2010**
**ಬೆಂಗಳೂರು, ದಿನಾಂಕ: 20ನೇ ಆಗಸ್ಟ್ 2010**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ವಾಜಿಪೇಯಿ ಆರೋಗ್ಯಶ್ರೀ ಯೋಜನೆಯನ್ನು ಗುಲ್ಬರ್ಗಾ ವಿಭಾಗದಲ್ಲಿ ಜಾರಿಗೊಳಿಸುತ್ತಿರುವ ರೀತಿಯಲ್ಲಿಯೇ ಬೆಳಗಾಂ ವಿಭಾಗದ ಏಳು ಜಿಲ್ಲೆಗಳಾದ ಬೆಳಗಾಂ, ಬಿಜಾಪುರ, ಬಾಗಲಕೋಟೆ, ಧಾರವಾಡ, ಗದಗ, ಹಾವೇರಿ ಮತ್ತು ಉತ್ತರ ಕನ್ನಡ ಗಳಿಗೂ ವಿಸ್ತರಿಸಿ ಜಾರಿಗೊಳಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ಯೋಜನೆಯನ್ನು ಜಾರಿಗೊಳಿಸುವ ಮೊದಲು ಅವಶ್ಯವಿರುವ ಪೂರ್ವಸಿದ್ಧತೆಗಳಾದ ನೆರವು ಏಜೆನ್ಸಿ ಗುರುತಿಸುವಿಕೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಮತ್ತು ಅದರಡಿ ರಚಿತವಾದ ನಿಯಮಗಳನ್ನು ಅನುಸರಿಸಿ ಮಾಡಲು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಕ್ರಮಕೈಗೊಳ್ಳುವುದು. ಹಾಗೆಯೇ ಜಾಲ ಆಸ್ಪತ್ರೆಗಳ ಗುರುತಿಸುವಿಕೆ, ಆರೋಗ್ಯ ಮೇಳ ನಡೆಸುವುದು ಇತ್ಯಾದಿ ಕ್ರಮವನ್ನು ಸಹ ಸದರಿ ಟ್ರಸ್ಟ್ ಕೈಗೊಳ್ಳುವುದು.

ಈ ಕಾರ್ಯಕ್ರಮಕ್ಕೆ ಅವಶ್ಯವಿರುವ ಅನುದಾನವನ್ನು ಪ್ರಸಕ್ತ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 2210-80-800-0-15 ರ ಅಡಿಯಲ್ಲಿ ಭರಿಸುವುದು.

ಈ ಬಗ್ಗೆ ಆರ್ಥಿಕ ಇಲಾಖೆಯನ್ನು ಸಮಾಲೋಚಿಸಲಾಗಿ, ಸದರಿ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಎಫ್‌ಡಿ 953/ವೆಚ್ಚ-5/2010 ದಿನಾಂಕ: 30-7-2010 ರಲ್ಲಿ ಅಭಿಪ್ರಾಯ ನೀಡಿದೆ ಹಾಗೂ ಈ ಆದೇಶವನ್ನು ಕರ್ನಾಟಕ ಸರ್ಕಾರ (ವ್ಯವಹಾರ ನಿರ್ವಹಣೆ) ನಿಯಮಗಳು, 1977 ರ ನಿಯಮ 17 (2) ರ ಪ್ರಾವಿಜೋ ರ ವ್ಯಾಪ್ತಿಯಡಿ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

20/8/2010
(ಕೆ.ಪಿ. ಚಂದ್ರಹಾಸ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಗೆ,
ಸಂಚಲನಕಾರರು, ಕರ್ನಾಟಕ ರಾಜ್ಯ ಪತ್ರ – ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 200 ಪ್ರತಿಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಒದಗಿಸಲು ಕೋರಿದೆ.

ಪ್ರತಿ:

1. ಮಹಾಲೇಖಪಾಲರು, ಕರ್ನಾಟಕ, ಲೆಕ್ಕಪತ್ರ / ಆಡಿಟ್, ಬೆಂಗಳೂರು
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃಧ್ಧಿ ಆಯುಕ್ತರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ.
6. ಮಾನ್ಯ ಮುಖ್ಯ ಮಂತ್ರಿಯವರ ಕಾರ್ಯದರ್ಶಿ.
7. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
9. ಸರ್ಕಾರದ ಕಾರ್ಯದರ್ಶಿ (ವೈದ್ಯಕೀಯ ಶಿಕ್ಷಣ),
10. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
11. ಕಾರ್ಯನಿರ್ವಾಹಕ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬೆಂಗಳೂರು.
12. ಯೋಜನಾ ಆಡಳಿತಾಧಿಕಾರಿ, ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣೆ ಯೋಜನೆ
13. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು
14. ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಎಲ್ಲಾ ಟ್ರಸ್ಟೀಗಳು,
15. ಜಿಲ್ಲಾ ಜಿಲ್ಲಾಧಿಕಾರಿ, ಬೆಳಗಾಂ ಜಿಲ್ಲೆ.
16. ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ, ಬೆಳಗಾಂ ಜಿಲ್ಲೆ.
17. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು. } ನಿರ್ದೇಶನಾಲಯದ ಮುಖಾಂತರ
18. ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರು.
19. ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
20. ಆರ್ಥಿಕ ಇಲಾಖೆ (ವೆಚ್ಚ-5).
21. ಯೋಜನಾ ಇಲಾಖೆ (ಜನಶಕ್ತಿ ಮತ್ತು ಉದ್ಯೋಗ ವಿಭಾಗ)
22. ಸಚಿವ ಸಂಪುಟ ಶಾಖೆ
20. ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
21. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು